# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 720 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಆರ್. ಬಿ. ತಿಮ್ಮಾಪೂರ |
| ಉತ್ತರಿಸಬೇಕಾದ ದಿನಾಂಕ | : | 25.09.2020 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2020–21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಅಂಧ ತಾಯಂದಿರಿಗೆ ಮಾಸಿಕ 2000 ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ಸರ್ಕಾರವು ಮಗುವಿನ ಮೊದಲ ಎರಡು ವರ್ಷದವರೆಗೆ ನೀಡುತ್ತಿದ್ದು, ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು ಘೋಷಿಸಿದ್ದು, ಇದು ಅನುಷ್ಠಾನದಲ್ಲಿದೆಯೇ; | 2020–21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಅಂಧ ತಾಯಂದಿರಿಗೆ ಮಾಸಿಕ 2000 ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ಮಗುವಿಗೆ ಮೊದಲ ಎರಡು ವರ್ಷದವರೆಗೆ ನೀಡುತ್ತಿರುವುದನ್ನು ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು ಘೋಷಿಸಿರುವ ಪ್ರಸ್ತಾವನೆಗೆ ಆರ್ಥಿಕ ಮತ್ತು ಯೋಜನೆ ಇಲಾಖೆಯ ಸಹಮತಿ ಕೋರಲಾಗಿದೆ. ಸಹಮತಿ ಸ್ವೀಕೃತವಾದೊಡನೆ ಆಡಳಿತಾತ್ಮಕ ಅನುಮೋದನೆ ಬಗ್ಗೆ ಸರ್ಕಾರಿ ಆದೇಶವನ್ನು ಹೊರಡಿಸಲಾಗುವುದು. |
| ಆ) | ಅನುಷ್ಠಾನಕ್ಕೆ ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ; | ಆಡಳಿತಾತ್ಮಕ ಅನುಮೋದನೆ ದೊರೆತ ನಂತರ ಯೋಜನೆ ಅನುಷ್ಠಾನಗೊಳಿಸಲು ಸೂಕ್ತ ಕ್ರಮಕೈಗೊಳ್ಳಲಾಗುವುದು. |
| ಇ) | ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | |

**ಸಂಖ್ಯೆ: ಮಮಇ 226 ಪಿಹೆಚ್‌ಪಿ 2020**

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು